## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | 598 |
| **ಮಾನ್ಯ ಸದಸ್ಯರ ಹೆಸರು** | ಶ್ರೀ ಗೋವಿಂದ ರಾಜು (ವಿಧಾನಸಭಾ ಕ್ಷೇತ್ರ) |
| **ಉತ್ತರಿಸುವ ಸಚಿವರು** | ಉನ್ನತ ಶಿಕ್ಷಣ ಸಚಿವರು |
| **ಉತ್ತರಿಸಬೇಕಾದ ದಿನಾಂಕ** | 09.03.2026 |

| | **ಪ್ರಶ್ನೆ** | **ಉತ್ತರ** |
|---|---|---|
| ಅ) | ರಾಜ್ಯದಲ್ಲಿ ವಿಶ್ವವಿದ್ಯಾಲಯಗಳಲ್ಲಿ ಮೂರು ಸಾವಿರ ಭೋಧಕರು ಆರು ಸಾವಿರ ಬೋಧಕೇತರರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ ತೆಗೆದುಕೊಂಡ ಕ್ರಮಗಳೇನು | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ವಿಶ್ವವಿದ್ಯಾಲಯಗಳಲ್ಲಿ ಖಾಲಿ ಹುದ್ದೆ ಇರುವುದರಿಂದ ಗುಣಮಟ್ಟದ ಶಿಕ್ಷಣದ ಮೇಲೆ ಹೊರೆ ಬೀಳುವುದಿಲ್ಲವೇ; ಖಾಲಿ ಇರುವಂತ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು: | ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಅವಶ್ಯವಿರುವ ಬೋಧಕರ ಹುದ್ದೆಗಳನ್ನು ಕಾಲಕಾಲಕ್ಕೆ ಭರ್ತಿ ಮಾಡಲು ಅನುವಾಗುವಂತೆ The Statutes Relating To Appointment And Promotion Of Teachers And Other Academic Staff And Measures For The Maintenance Of Standards In Higher Education As Per The UGC Regulations 2018ನ್ನು ಘನತೆವೆತ್ತ ಕುಲಾಧಿಪತಿಗಳ ಅನುಮೋದನೆಯೊಂದಿಗೆ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಿಗೆ ಏಕರೂಪ ಮಾದರಿ ಪರಿನಿಯಮಗಳನ್ನು ರಚಿಸಲಾಗಿರುತ್ತದೆ.<br><br>ರಾಜ್ಯದಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸುವ ಸದುದ್ದೇಶದಿಂದ ಸರ್ಕಾರವು ಈ ಕೆಳಕಂಡ ವಿಶ್ವವಿದ್ಯಾಲಯಗಳಿಗೆ ಬೋಧಕ-ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಿರುತ್ತದೆ. |

| ಕ್ರ.ಸಂ. | ವಿಶ್ವವಿದ್ಯಾಲಯಗಳ ಹೆಸರು | ಭರ್ತಿ ಮಾಡಲು ಅನುಮತಿ ನೀಡಿರುವ ಬೋಧಕ ಹುದ್ದೆಗಳ | ಭರ್ತಿ ಮಾಡಲು ಅನುಮತಿ ನೀಡಿರುವ ಬೋಧಕೇತರ ಹುದ್ದೆಗಳ ಸಂಖ್ಯೆ | ಅನುಮೋದನೆ ನೀಡಿದ ದಿನಾಂಕ |
|---|---|---|---|---|
| 1 | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು | 31 | - | 27.06.2024 |
| 2 | ದಾವಣಗೆರೆ ವಿಶ್ವವಿದ್ಯಾಲಯ | 125 | 13 | 24.01.2017 |
| | | - | 10 | 03.03.2022 |
| 3 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು. | - | 01 | 19.06.2023 |
| 4 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, | 08 | 17 | 29.03.2023 |

| | | | | |
|---|---|---|---|---|
| | ಹಾವೇರಿ | | | |
| 5 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು. | 20 | - | 05.07.2025 |
| 6 | ಕಿತ್ತೂರು ರಾಣಿಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ | 60 | - | 27.10.2011 |
| | | - | 225 | 27.01.2012 |
| | | - | 33 | 07.09.2022 |
| | **ಒಟ್ಟು** | **244** | **299** | |

ಮುಂದುವರೆದು, ರಾಜ್ಯದ ಹಲವು ಸಾರ್ವಜನಿಕ ವಿಶ್ವವಿದ್ಯಾಲಯಗಳು ಬೋಧಕ-ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡುವಂತೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಗಳು ಸರ್ಕಾರದ ವಿವಿಧ ಇಲಾಖೆಗಳ ಪರಿಶೀಲನೆಯಲ್ಲಿರುತ್ತವೆ. ಸದರಿ ವಿವರಗಳನ್ನು **ಅನುಬಂಧ**ದಲ್ಲಿ ಒದಗಿಸಲಾಗಿದೆ.

ಈ ಮಧ್ಯೆ, ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯವು ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಮತ್ತು ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ, 2022ರನ್ವಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಾತಿ ಪ್ರಮಾಣವನ್ನು ಕ್ರಮವಾಗಿ ಶೇ.15 ರಿಂದ ಶೇ17ಕ್ಕೆ ಹಾಗೂ ಶೇ.3 ರಿಂದ ಶೇ.7ಕ್ಕೆ ಹೆಚ್ಚಿಸಲಾಗಿರುವುದನ್ನು ಪ್ರಶ್ನಿಸಿದ ಪ್ರಕರಣಗಳಲ್ಲಿ ದಿನಾಂಕ: 27.11.2025ರಂದು ಮಧ್ಯಂತರ ಆದೇಶ ನೀಡಿರುತ್ತದೆ.

ಉಲ್ಲೇಖಿತ ತೀರ್ಪಿನನ್ವಯ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 01 ಸೆಹಿಮ 2026, ದಿನಾಂಕ: 27.02.2026ರಲ್ಲಿ, 2022ರ ಅಧಿನಿಯಮದನ್ವಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಹೆಚ್ಚಿಸಲಾದ ಮೀಸಲಾತಿ ಪ್ರಮಾಣವನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ದಾಖಲಾಗಿದ್ದ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ನೀಡಿರುವ ಮಧ್ಯಂತರ ಆದೇಶದ ಹಿನ್ನಲೆಯಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಆದೇಶಿಸಲಾಗಿದೆ. ಅದರನ್ವಯ ರೋಸ್ಟರ್ ಬಿಂದುಗಳನ್ನು ನಿಗದಿಪಡಿಸಿಕೊಂಡು ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳು ನೇಮಕಾತಿ ಸಂಬಂಧ ಪ್ರಸ್ತಾವನೆಯನ್ನು ಸಲ್ಲಿಸಬೇಕಾಗಿರುತ್ತದೆ.

ಯುಜಿಸಿ ಮಾನದಂಡಗಳನ್ವಯ ಅರ್ಹ ವಿದ್ಯಾರ್ಹತೆಯನ್ನು ಹೊಂದಿರುವ ಉಪನ್ಯಾಸಕರುಗಳನ್ನು ಸರ್ಕಾರದಿಂದ ಮಂಜೂರಾದ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನಾಗಿ ನೇಮಿಸಿಕೊಂಡು ವಿಶ್ವವಿದ್ಯಾಲಯದ

| | | |
|---|---|---|
| | | ಶೈಕ್ಷಣಿಕ ಚಟುವಟಿಕೆಗಳನ್ನು ಸುಗಮವಾಗಿ ನಿರ್ವಹಿಸಲಾಗುತ್ತಿದೆ. ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳ ಬೋಧಕ ಸಿಬ್ಬಂದಿಗಳ ನೇಮಕಾತಿಗೆ ನಿಗದಿಪಡಿಸಲಾಗಿರುವ ವಿದ್ಯಾರ್ಹತೆಯನ್ನೇ ಅತಿಥಿ ಉಪನ್ಯಾಸಕರಿಗೂ ಸಹ ನಿಗದಿಪಡಿಸಿ ನೇಮಕ ಮಾಡಿಕೊಳ್ಳಲಾಗುತ್ತಿದ್ದು, ಶಿಕ್ಷಣದ ಗುಣಮಟ್ಟ ಕುಸಿಯದಂತೆ ನೋಡಿಕೊಳ್ಳಲಾಗುತ್ತಿದೆ.<br><br>ಅದೇ ರೀತಿ ವಿಶ್ವವಿದ್ಯಾಲಯಗಳ ದೈನಂದಿನ ಕೆಲಸಗಳು ಸುಸೂತ್ರವಾಗಿ ನಡೆಯಲು ಅನುವಾಗುವಂತೆ ಮಂಜೂರಾದ ಬೋಧಕೇತರ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕ/ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡು ವಿಶ್ವವಿದ್ಯಾಲಯಗಳ ಶೈಕ್ಷಣಿಕ ಚಟುವಟಿಕೆಗಳಿಗೆ ಯಾವುದೇ ತೊಂದರೆಯಾಗದಂತೆ, ಕಾರ್ಯನಿರ್ವಹಿಸಲಾಗುತ್ತಿದೆ. |
| ಇ) | ರಾಜ್ಯದಲ್ಲಿರುವ 32 ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಶೇ.70ರಷ್ಟು ಹುದ್ದೆಗಳು ಖಾಲಿ ಇದ್ದು ಕೆಲವು ವಿವಿಗಳಲ್ಲಿ ಶೇ.100 ರಷ್ಟು ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಹೊಸದಾಗಿ ಸ್ಥಾಪಿಸಲಾದ ಸಾರ್ವಜನಿಕ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಬೋಧಕ/ಬೋಧಕೇತರ ಹುದ್ದೆಗಳು, ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನದಲ್ಲಿದ್ದು, ರಾಜ್ಯದಲ್ಲಿರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಬೋಧಕ/ಬೋಧಕೇತರ ಹುದ್ದೆಗಳು ಖಾಲಿ ಇರುವುದು, ಮೂಲಭೂತ ಸೌಕರ್ಯಗಳ ಕೊರತೆ ಮುಂತಾದ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಕೊರತೆಗಳನ್ನು ನಿವಾರಿಸಲು ರಾಜ್ಯದಲ್ಲಿರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸರ್ಕಾರದಿಂದ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ.<br><br>ಸದರಿ ಸಮಿತಿಯು ಆರ್ಥಿಕ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ವಿಶ್ವವಿದ್ಯಾಲಯಗಳ ಸಂಶೋಧನೆ, ಮೂಲಭೂತ ಸೌಲಭ್ಯ, ಅನುದಾನ, ಪಿಂಚಣಿ ಹಾಗೂ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲು ಅನುಕೂಲವಾಗುವಂತೆ ಅಗತ್ಯ ಹುದ್ದೆಗಳ ನೇಮಕಾತಿ ಹಾಗೂ ಇತ್ಯಾದಿ ಅವಶ್ಯಕ ವಿಷಯಗಳ ಕುರಿತು ಹಲವು ಸಭೆಗಳನ್ನು ನಡೆಸಿರುತ್ತದೆ.<br>ಸದರಿ ಸಚಿವ ಸಂಪುಟ ಉಪಸಮಿತಿಯು ವಿಶ್ವವಿದ್ಯಾಲಯಗಳ ಬಲವರ್ಧನೆ ಕುರಿತು ಸಚಿವ ಸಂಪುಟದ ಮುಂದೆ ವರದಿ ಮಂಡಿಸಲು ಅನುವಾಗುವಂತೆ ಅಗತ್ಯ ದಾಖಲಾತಿಗಳೊಂದಿಗೆ ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳ ಅಂಕಿ-ಅಂಶಗಳನ್ನೊಳಗೊಂಡ ಸಂಪೂರ್ಣ ಚಿತ್ರವನ್ನು ಇಲಾಖೆಯು ಸಿದ್ಧಪಡಿಸುತ್ತಿದೆ. |
| ಈ) | ಹೊಸದಾಗಿ ಆರಂಭವಾದ ವಿಶ್ವವಿದ್ಯಾಲಯಗಳಿಗೆ ಹುದ್ದೆಗಳು ಮಂಜೂರಾಗಿದ್ದು, ಸದರಿ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು? | |

| | | |
|---|---|---|
| | | ಸದರಿ ಸಚಿವ ಸಂಪುಟ ಉಪಸಮಿತಿಯು ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳನ್ನು ಆಡಳಿತಾತ್ಮಕ/ಶೈಕ್ಷಣಿಕ/ ಸಂಶೋಧನಾತ್ಮಕವಾಗಿ/ಆರ್ಥಿಕವಾಗಿ ಬಲವರ್ಧನೆಗೊಳಿಸುವ ನಿಟ್ಟಿನಲ್ಲಿ ಕಾರ್ಯಚರಣೆಯಲ್ಲಿದ್ದು, ಸಮಿತಿಯ ಅಂತಿಮ ವರದಿಯನ್ನು ನಿರೀಕ್ಷಿಸಲಾಗಿರುತ್ತದೆ. |

**ಸಂಖ್ಯೆ**: ಇಡಿ 58 ಯುಎನ್‌ಇ 2026

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು

7

<u>ಅನುಬಂಧ-1</u>

| ಕ್ರ. ಸಂ. | ವಿಶ್ವವಿದ್ಯಾಲಯಗಳ ಹೆಸರು | ಬೋಧಕ ಹುದ್ದೆಗಳ ಸಂಖ್ಯೆ | ಬೋಧಕೇತರ ಹುದ್ದೆಗಳ ಸಂಖ್ಯೆ | ಪ್ರಸ್ತುತ ಹಂತ |
|---|---|---|---|---|
| 1 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 32 | - | ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿ ಇರುತ್ತದೆ. |
| 2 | ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 62 | 12 | ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿ ಇರುತ್ತದೆ. |
| 3 | ದಾವಣಗೆರೆ ವಿಶ್ವವಿದ್ಯಾಲಯ | 29 | - | ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |
| 4 | ಹಾವೇರಿ ವಿಶ್ವವಿದ್ಯಾಲಯ | 59 | 171 | ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ |
| 5 | ಕೊಡಗು ವಿಶ್ವವಿದ್ಯಾಲಯ | 06 | 07 | ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ |
| 6 | ಕನ್ನಡ ವಿಶ್ವವಿದ್ಯಾಲಯ | 37 | 43 | ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ |
| 7 | ಮೈಸೂರು ವಿಶ್ವವಿದ್ಯಾಲಯ | 76 | - | ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ |
| | | 150 | - | ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಪರಿಷ್ಕೃತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ವಿಶ್ವವಿದ್ಯಾಲಯಕ್ಕೆ ತಿಳಿಸಲಾಗಿದೆ |
| 8 | ಗುಲಬರ್ಗಾ ವಿಶ್ವವಿದ್ಯಾಲಯ | 75 | 58 | ಮೀಸಲಾತಿ ಬಿಂದುಗಳನ್ನು ಪರಿಷ್ಕರಿಸಿ ಸಲ್ಲಿಸುವಂತೆ ಪ್ರಸ್ತಾವನೆಯನ್ನು ವಿಶ್ವವಿದ್ಯಾಲಯಕ್ಕೆ ಹಿಂದಿರುಗಿಸಲಾಗಿದೆ |
| 9 | ಬೀದರ್ ವಿಶ್ವವಿದ್ಯಾಲಯ | 29 | 109 | ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಪರಿಷ್ಕೃತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ವಿಶ್ವವಿದ್ಯಾಲಯಕ್ಕೆ ತಿಳಿಸಲಾಗಿದೆ. |
| 10 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ | 56 | 82 | ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಪರಿಷ್ಕೃತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ವಿಶ್ವವಿದ್ಯಾಲಯಕ್ಕೆ ತಿಳಿಸಲಾಗಿದೆ. |
| | **ಒಟ್ಟು** | **611** | **482** | |